For more job news visit : www.kpscvaani.com

ಸಂಖ್ಯೆ: ಇಡಿ/ಕೆಇಎ/ಆಡಳಿತ/ಸಿಆರ್–05/2024–25(ಕಲ್ಯಾಣ ಕರ್ನಾಟಕ) ದಿನಾಂಕ:28.04.2026

ಪ್ರಕಟಣೆ

ಕಲ್ಯಾಣ ಕರ್ನಾಟಕ ವೃಂದದ ವಿವಿಧ ಗ್ರೂಪ್ 'ಎ' ಮತ್ತು 'ಬಿ' ಹುದ್ದೆಗಳ ನೇಮಕಾತಿ ಸಂಬಂಧ ನಡೆಸಲಾದ ಸ್ಪರ್ಧಾತ್ಮಕ ಪರೀಕ್ಷೆಗಳ ಕೀ ಉತ್ತರಗಳನ್ನು ಪ್ರಕಟಿಸುವ ಬಗ್ಗೆ.

****

ಕರ್ನಾಟಕ ಪರೀಕ್ಷಾ ಪ್ರಾಧಿಕಾರದಿಂದ ಕಲ್ಯಾಣ ಕರ್ನಾಟಕ ವೃಂದದ ವಿವಿಧ ಗ್ರೂಪ್ 'ಎ' ಮತ್ತು 'ಬಿ' ಹುದ್ದೆಗಳ ನೇಮಕಾತಿ ಸಂಬಂಧ ದಿನಾಂಕ:27.04.2026 ರಂದು ನಡೆಸಿದ ಸ್ಪರ್ಧಾತ್ಮಕ ಪರೀಕ್ಷೆಗಳ ಕೀ ಉತ್ತರಗಳನ್ನು ಪ್ರಾಧಿಕಾರದ ವೆಬ್‌ಸೈಟ್‌ನಲ್ಲಿ ಅಭ್ಯರ್ಥಿಗಳ ಮಾಹಿತಿಗಾಗಿ ದಿನಾಂಕ:28.04.2026 ರಂದು ಪ್ರಕಟಿಸಲಾಗಿರುತ್ತದೆ.

ಪ್ರಕಟಿತ ಕೀ ಉತ್ತರಗಳಿಗೆ ಆಕ್ಷೇಪಣೆಗಳಿದ್ದಲ್ಲಿ, ಅಭ್ಯರ್ಥಿಗಳು ಪ್ರಾಧಿಕಾರದ ವೆಬ್‌ಸೈಟ್‌ನಲ್ಲಿ ಒದಗಿಸಲಾದ ಆನ್‌ಲೈನ್ ಪೋರ್ಟಲ್ https://cetonline.karnataka.gov.in/kea/ ಮೂಲಕ **ದಿನಾಂಕ:30.04.2026 ರ ಸಂಜೆ 05:00** ಘಂಟೆಯೊಳಗೆ ಸಲ್ಲಿಸಬಹುದಾಗಿರುತ್ತದೆ.

ಆಕ್ಷೇಪಣೆಗಳನ್ನು ಸಲ್ಲಿಸುವ ಸಂದರ್ಭದಲ್ಲಿ ಪತ್ರಿಕೆಯ ವಿವರ, ಪರೀಕ್ಷಾ ದಿನಾಂಕ, ವರ್ಷನ್ ಕೋಡ್, ಪ್ರಶ್ನೆ ಸಂಖ್ಯೆ ಹಾಗೂ ಪೂರಕ ದಾಖಲೆಗಳನ್ನು PDF ರೂಪದಲ್ಲಿ ಸಲ್ಲಿಸಬೇಕು. ಸಲ್ಲಿಸಲಾಗುವ ಪ್ರತಿ ಆಕ್ಷೇಪಣೆಗೆ ರೂ.25/–ನ್ನು ಪಾವತಿಸತಕ್ಕದ್ದು ಹಾಗೂ ಆಕ್ಷೇಪಣೆ ಶುಲ್ಕವನ್ನು ಹಿಂದಿರುಗಿಸಲಾಗುವುದಿಲ್ಲ. ಪ್ರಶ್ನೆ ಸಂಖ್ಯೆ, ವರ್ಷನ್ ಕೋಡ್ ನಮೂದಿಸದೇ ಇರುವ ಅಥವಾ ಅಪೂರ್ಣ/ಆಧಾರರಹಿತವಾಗಿರುವ ಹಾಗೂ ಶುಲ್ಕ ಪಾವತಿಸದ ಆಕ್ಷೇಪಣೆಗಳನ್ನು ಪರಿಗಣಿಸಲಾಗುವುದಿಲ್ಲ.

ವಿಷಯ ತಜ್ಞರ ಸಮಿತಿಯು ಪರಿಶೀಲಿಸಿ ತೀರ್ಮಾನಿಸುವ ಕೀ ಉತ್ತರಗಳು ಅಂತಿಮವಾಗಿರುತ್ತದೆ.

ಕಾರ್ಯನಿರ್ವಾಹಕ ನಿರ್ದೇಶಕರು

18ನೇ ಅಡ್ಡ ರಸ್ತೆ, ಸಂಪಿಗೆ ರಸ್ತೆ, ಮಲ್ಲೇಶ್ವರಂ, ಬೆಂಗಳೂರು – 560 012
18th Cross, Sampige Road, Malleshwaram, Bengaluru - 560 012.
Phone: 080 - 23 564 583, 23 460 460, 23 361 786, Fax: 080 - 23 461 576
e-mail : keauthority-ka@nic.in Website : http://kea.kar.nic.in